## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 796 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ |
| ಉತ್ತರಿಸುವ ದಿನಾಂಕ | : | 12-12-2025 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ತಾಲ್ಲೂಕಿನ ವಿವಿಧ ಕಾಲೇಜುಗಳಲ್ಲಿ 1000 ಕ್ಕಿಂತ ಹೆಚ್ಚು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿ/ ವಿದ್ಯಾರ್ಥಿನಿಯರು ಸುಮಾರು 50-100 ಕಿ.ಮೀ ದೂರದಿಂದ ಬಂದು ಸ್ನಾತಕೋತ್ತರ ಪದವಿಯನ್ನು ವ್ಯಾಸಂಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಿಂಧನೂರು ತಾಲೂಕಿನಲ್ಲಿ 05 ಸ್ನಾತಕೋತ್ತರ ಪದವಿ ಕಾಲೇಜುಗಳಿರುತ್ತವೆ. ಸದರಿ ಕಾಲೇಜಗಳಲ್ಲಿ 200ಕ್ಕೂ ಹೆಚ್ಚು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿ/ ವಿದ್ಯಾರ್ಥಿನಿಯರು ವ್ಯಾಸಂಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ವಿವರಗಳನ್ನು **ಅನುಬಂಧ-1** ರಲ್ಲಿ ಒದಗಿಸಿದೆ. |
| ಆ) | ಈ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಗೆ ವಾಸ್ತವ್ಯಕ್ಕಾಗಿ ಸಿಂಧನೂರು ತಾಲ್ಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಯಾವುದೇ ವಿದ್ಯಾರ್ಥಿ ವಸತಿ ನಿಲಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಸಂಬಂಧ ಸರ್ಕಾರ ಯಾವ ಕ್ರಮ ವಹಿಸಿದೆ; | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಸಿಂಧನೂರು ತಾಲ್ಲೂಕಿನಲ್ಲಿ 05 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದ್ದು, 2025-26ನೇ ಸಾಲಿಗೆ 1573 ಸಂಖ್ಯೆ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗಿರುತ್ತದೆ. ವಿವರಗಳನ್ನು **ಅನುಬಂಧ-2** ರಲ್ಲಿ ಒದಗಿಸಿದೆ.<br><br>ಸಿಂಧನೂರು ತಾಲ್ಲೂಕಿಗೆ ಹೊಸದಾಗಿ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವ ಸಂಬಂಧ ಜಿಲ್ಲೆಯಿಂದ ನಿಗಧಿತ ನಮೂನೆಗಳಲ್ಲಿ ಜಿಲ್ಲೆಯ ಸಕ್ಷಮ ಪ್ರಾಧಿಕಾರಿಗಳಾದ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ರವರ ಮುಖಾಂತರ ಪ್ರಸ್ತಾವನೆಗಳು ಸ್ವೀಕೃತವಾದಲ್ಲಿ, ನಿಯಮಾನುಸಾರ ಅನುದಾನದ ಲಭ್ಯತೆಯನ್ನು ಆಧರಿಸಿ, ಆದ್ಯತೆ ಮೇಲೆ ಪರಿಶೀಲಿಸಲಾಗುವುದು. |
| ಇ) | ಯಾವ ಕಾಲಮಿತಿಯೊಳಗೆ ಸದರಿ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಗೆ ಮಹಿಳಾ ಹಾಗೂ ಪುರುಷ ವಿದ್ಯಾರ್ಥಿ ವಸತಿ ನಿಲಯಗಳನ್ನು ನಿರ್ಮಾಣ ಮಾಡಲಾಗುತ್ತದೆ? | ರಾಯಚೂರು ಜಿಲ್ಲೆ, ಸಿಂಧನೂರು ತಾಲ್ಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಒಟ್ಟು 05 ಮೆಟ್ರಿಕ್ ನಂತರದ ಬಾಲಕರ/ಬಾಲಕಿಯರ ವಿದ್ಯಾರ್ಥಿ ನಿಲಯಗಳನ್ನು ನಡೆಸಲಾಗುತ್ತಿದ್ದು, 02 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳಲ್ಲಿ ಮತ್ತು 03 ವಿದ್ಯಾರ್ಥಿ ನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸ್ವಂತ ಕಟ್ಟಡದ ಕಾಮಗಾರಿಯ ಪ್ರಸ್ತುತ ಹಂತದ ವಿವರವನ್ನು **ಅನುಬಂಧ-3** ರಲ್ಲಿ ಒದಗಿಸಿದೆ. ಈ ಮೂರು ಕಾಮಗಾರಿಗಳನ್ನು ಆದ್ಯತೆ ಮೇಲೆ ಪೂರ್ಣಗೊಳಿಸಿ, ವಿದ್ಯಾರ್ಥಿ ನಿಲಯವಾಗಿ ಬಳಸಿಕೊಳ್ಳಲಾಗುವುದು. |

**ಸಕಇ 948 ಪಕವಿ 2025**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**

# ಅನುಬಂಧ-1

## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ. ಬಸನಗೌಡ ಬಾದರ್ಲಿ ರವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:796 ಕ್ಕೆ ಅನುಬಂಧ.

| ಕ್ರ. ಸಂ | ಸ್ನಾತಕೋತ್ತರ ಕಾಲೇಜಿನ ಹೆಸರು | ಪ.ಜಾತಿ | ಪ. ಪಂಗಡ | ಒಟ್ಟು |
|---|---|---|---|---|
| 01 | ಸರ್ಕಾರಿ ಸ್ನಾತಕೋತ್ತರ ಕೇಂದ್ರ ಸಿಂಧನೂರು | 79 | 51 | 130 |
| 02 | ಅಕ್ಕ ಮಹಾದೇವಿ ಸ್ನಾತಕೋತ್ತರ ಕೇಂದ್ರ ಸಿಂಧನೂರು | 27 | 19 | 46 |
| 03 | ವಿಶ್ವಮ್ ಸ್ನಾತಕೋತ್ತರ ಕೇಂದ್ರ ಸಿಂಧನೂರು | 1 | 0 | 1 |
| 04 | ಆಕ್ಸಫರ್ಡ ಸ್ನಾತಕೋತ್ತರ ಕೇಂದ್ರ ಸಿಂಧನೂರು | 12 | 07 | 19 |
| 05 | ಶಂಕರ್ ಸಂಸ್ಥೆ ಸ್ನಾತಕೋತ್ತರ ಕೇಂದ್ರ ಸಿಂಧನೂರು | 20 | 22 | 42 |
| | **ಒಟ್ಟು :** | **139** | **99** | **238** |

## ಅನುಬಂಧ-2.

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ. ಬಸನಗೌಡ ಬಾದರ್ಲಿ ರವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:796 ಕ್ಕೆ ಅನುಬಂಧ.**

| ಕ್ರ.ಸಂ | ವಿದ್ಯಾರ್ಥಿನಿಲಯಗಳ ವಿವರ | ಮಂಜೂರಾತಿ ಸಂಖ್ಯೆ | ದಾಖಲಾತಿ ಸಂಖ್ಯೆ |
|---|---|---|---|
| 1 | ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ವೃತ್ತಿಪರ ಬಾಲಕಿಯರ ವಿದ್ಯಾರ್ಥಿನಿಲಯ, ಸಿಂಧನೂರು ತಾಲ್ಲೂಕು | 100 | 363 |
| 2 | ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಪದವಿ ಬಾಲಕಿಯರ ವಿದ್ಯಾರ್ಥಿನಿಲಯ, ಸಿಂಧನೂರು ತಾಲ್ಲೂಕು | 100 | 215 |
| 2 | ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಪಿಯು ಬಾಲಕರ ವಿದ್ಯಾರ್ಥಿನಿಲಯ, ಸಿಂಧನೂರು ತಾಲ್ಲೂಕು | 100 | 295 |
| 4 | ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಪದವಿ ಬಾಲಕರ ವಿದ್ಯಾರ್ಥಿನಿಲಯ, ಸಿಂಧನೂರು ತಾಲ್ಲೂಕು | 200 | 273 |
| 5 | ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಪದವಿ ಬಾಲಕರ ವಿದ್ಯಾರ್ಥಿನಿಲಯ, ಸಿಂಧನೂರು ತಾಲ್ಲೂಕು | 100 | 427 |
| | **ಒಟ್ಟು :** | **600** | **1573** |

# ಅನುಬಂಧ-3.

## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ. ಬಸನಗೌಡ ಬಾದರ್ಲಿ ರವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:796 ಕ್ಕೆ ಅನುಬಂಧ.

| ಕ್ರ. ಸಂ | ವಿದ್ಯಾರ್ಥಿನಿಲಯಗಳ ಹೆಸರು | ಸ್ವಂತ/ ಬಾಡಿಗೆ | ಸ್ವಂತ ಕಟ್ಟಡ ಕಾಮಗಾರಿಯ ಪ್ರಸ್ತುತ ಹಂತ |
|---|---|---|---|
| 01 | ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ಪದವಿ-1 ವಿದ್ಯಾರ್ಥಿನಿಲಯ ಸಿಂಧನೂರು | ಸ್ವಂತ | |
| 02 | ಡಾ\|ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ಪದವಿ-2 ವಿದ್ಯಾರ್ಥಿ ನಿಲಯ ಸಿಂಧನೂರು | ಬಾಡಿಗೆ | ನೆಲಹಾಸು ಕಾಮಗಾರಿ ಪ್ರಗತಿಯಲ್ಲಿದೆ. |
| 03 | ಡಾ\|ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ಪಿ.ಯು.ಸಿ ವಿದ್ಯಾರ್ಥಿ ನಿಲಯ ಸಿಂಧನೂರು | ಬಾಡಿಗೆ | ತಳಪಾಯ ಕಾಮಗಾರಿ ಪ್ರಗತಿಯಲ್ಲಿದೆ. |
| 04 | ಡಾ\|\|ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ಪದವಿ ವಿದ್ಯಾರ್ಥಿ ನಿಲಯ ಸಿಂಧನೂರು | ಸ್ವಂತ | |
| 05 | ಡಾ \|\|ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ವೃತ್ತಿಪರ ವಿದ್ಯಾರ್ಥಿ ನಿಲಯ ಸಿಂಧನೂರು | ಬಾಡಿಗೆ | ಬಣ್ಣ ಬಳಿಯುವ ಕಾಮಗಾರಿ ಪ್ರಗತಿಯಲ್ಲಿದೆ. |